**Online Newspaper Clipping Service**
**Dtd-Sunday, 2nd , July 2023** **Page No.09**

**ಸಂಯುಕ್ತ ಕರ್ನಾಟಕ**

# ಹಣಗಳಿಕೆಗಿಂತ ಸೇವಾ ಮನೋಭಾವ ಬೆಳೆಸಿಕೊಳ್ಳಿ



ಸಂ.ಕ ಸಮಾಚಾರ, ಕೋಲಾರ

ವೈದ್ಯಕೀಯ ಕ್ಷೇತ್ರದಲ್ಲಿ ಹಣ ಗಳಿಕೆಗಿಂತ ಸೇವಾ ಮಾನೋಭಾವನೆಯಿಂದ ಮುನ್ನಡೆದರೆ ಮಾತ್ರ ವೃತ್ತಿ ಘನತೆಯನ್ನು ಕಾಪಾಡಿಕೊಳ್ಳುವ ಜೊತೆಗೆ ಯಶಸ್ಸು ಕಾಣಲು ಸಾಧ್ಯ ಎಂದು ಶ್ರೀ ದೇವರಾಜ್ ಅರಸ್ ಉನ್ನತ ಶಿಕ್ಷಣ ಹಾಗೂ ಸಂಶೋಧನಾ ಸಂಸ್ಥೆಯ ಕುಲಸಚಿವ ಡಾ.ಡಿ.ವಿ.ಎಲ್.ಎನ್.ಪ್ರಸಾದ್ ಅಭಿಪ್ರಾಯಪಟ್ಟರು.

ಶನಿವಾರ ನಗರದ ಶ್ರೀ ದೇವರಾಜ್ ಅರಸ್ ಉನ್ನತ ಶಿಕ್ಷಣ ಹಾಗೂ ಸಂಶೋಧನಾ ಸಂಸ್ಥೆಯ ಆಡಿಟೋರಿಯಂನಲ್ಲಿ ನಡೆದ ವೈದ್ಯರ ದಿನಾಚರಣೆಯಲ್ಲಿ ಮಾತನಾಡಿ, ವೈದ್ಯಕೀಯ ಕ್ಷೇತ್ರದಲ್ಲಿ ಸೇವಾ ಮನೋಭಾವನೆ ಮರೆಯಾಗಿ ಹಣ ಗಳಿಕೆ ಪ್ರಾಮುಖ್ಯತೆ ಪಡೆಯುತ್ತಿರುವುದು ಆತಂಕಕಾರಿ ಬೆಳವಣಿಗೆ. ಸರಿತಪ್ಪುಗಳ ಆತ್ಮವಿಮರ್ಶೆಯ ಮೂಲಕ ಆಗಿರುವ ಸೇವೆಗೆ ಆದ್ಯತೆ ನೀಡುವಂತಾಗಬೇಕು ಎಂದು ಕಿವಿಮಾತು ಹೇಳಿದರು.

ದೇವರಾಜ್ ಅರಸ್ ವೈದ್ಯಕೀಯ ವಿದ್ಯಾಲಯದ ಪ್ರಾಂಶುಪಾಲ ಡಾ.ಕೆ.ಪ್ರಭಾಕರ್ ಮಾತನಾಡಿ, ಸಮಾಜದ 'ಲ್ಲಾಗುತ್ತಿರುವ ಏರುಪೇರುಗಳಿಂದ ತೀವ್ರ ತರವಾದ ಕಾಯಿಲೆಗಳು ಪತ್ತೆಯಾಗುತ್ತಿವೆ. ಅವುಗಳನ್ನು ನಿಯಂತ್ರಿಸಲು ಹೊಸ ಹೊಸ ಸಂಶೋಧನೆಗಳು ನಡೆಯಬೇಕಿದೆ, ಯುವ ವೈದ್ಯರು ಇದರಲ್ಲಿ ತೊಡಗಿಸಿಕೊಳ್ಳಲು ಮುಂದಾಗಬೇಕು ಎಂದು ಕರೆ ನೀಡಿದರು.

ವೈದ್ಯರಲ್ಲಿ ಸೇವಾ ಮನೋಭಾವ ಬಲಗೊಳ್ಳಬೇಕು, ರೋಗಿಗಳು ನಿಮ್ಮಲ್ಲಿಗೆ ಬಂದಾಗ ಅವರನ್ನು ಪ್ರೀತಿಯಿಂದ ಮಾತನಾಡಿಸುವುದ-ರಿಂದಲೇ ಅವರಲ್ಲಿ ಮನೋಸ್ಥೈರ್ಯ ಹೆಚ್ಚಿ ರೋಗ ತಹಬಂದಿಗೆ ಬರುತ್ತದೆ, ಆದ್ದರಿಂದ ವೈದ್ಯರಿಗೆ ತಾಳ್ಮೆ, ಪ್ರೀತಿ ಅಗತ್ಯ ಎಂದರು. ಹಿರಿಯ ಸ್ತ್ರೀ ರೋಗ ತಜ್ಞರಾದ ಡಾ.ಚಂದ್ರಶೇಖರ್ ಮೂರ್ತಿ ಹಾಗೂ ನಂದಿ ಮೆಡಿಕಲ್ ಕಾಲೇಜಿನ ಜನರಲ್ ಮೆಡಿಸಿನ್ ವಿಭಾಗದ ಮುಖ್ಯಸ್ಥ ಡಾ.ಕೆ.ಎನ್.ರಮೇಶ್ ಅವರನ್ನು ಸನ್ಮಾನಿಸಲಾಯಿತು. ಹಳೇ ವಿದ್ಯಾರ್ಥಿಗಳ ಸಂಘದ ಉಪಾಧ್ಯಕ್ಷ ಡಾ.ಕೆ.ಎನ್.ಶಶಿಧರ್, ಕಾರ್ಯದರ್ಶಿ ಡಾ.ವಿನಯ್‌ಬಾಬು, ಉಪಕಾರ್ಯದರ್ಶಿ ಡಾ.ಎ.ಅನಿತ ಡಾ.ಸಿಮ್ಮುನಿನಾರಾಯಣ ಇದ್ದರು.